Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

31.05.2024 14.30 hrs

<><*<><>*><>

<u>ಮುಖ್ಯಾಂಶಗಳು</u>

**೧. ಜೂನ್ ೪ ರಂದು ಲೋಕಸಭಾ ಚುನಾವಣೆ ಮತ ಎಣಿಕೆ; ಜಿಲ್ಲಾಡಳಿತದಿಂದ ಪೂರ್ವ ತಯಾರಿ**

**೨. ೨೦೨೪-೨೫ನೇ ಶೈಕ್ಷಣಿಕ ವರ್ಷದ ಶಾಲೆಗಳು ಆರಂಭ; ವಿದ್ಯಾರ್ಥಿಗಳಿಗೆ ಶಿಕ್ಷಕರಿಂದ ಸ್ವಾಗತ**

**೩. ವಿಶೇಷ ತನಿಖಾ ತಂಡದಿಂದ ಸಂಸದ ಪ್ರಜ್ವಲ್ ರೇವಣ್ಣ ಬಂಧನ**

**೪. ಇಂದು ವಿಶ್ವ ತಂಬಾಕು ರಹಿತ ದಿನ; ದುಷ್ಪರಿಣಾಮಗಳ ಕುರಿತು ಜನರಲ್ಲಿ ಅರಿವು**

<><*<><>*><>

ಜೂನ್ ೪ ರಂದು ನಡೆಯಲಿರುವ ಲೋಕಸಭಾ ಚುನಾವಣೆಯ ಮತ ಎಣಿಕೆ ಕಾರ್ಯಕ್ಕೆ ರಾಜ್ಯದ ವಿವಿಧೆಡೆ ಜಿಲ್ಲಾಡಳಿತದಿಂದ ಸಕಲ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಹಾಸನ ಲೋಕಸಭಾ ಕ್ಷೇತ್ರದ ಮತ ಎಣಿಕೆ ಕಾರ್ಯ ನಡೆಯಲಿರುವ ಇಂಜಿನಿಯರಿಂಗ್ ಕಾಲೇಜಿನಲ್ಲಿ ಪೂರ್ವ ತಯಾರಿ ಮಾಡಿಕೊಳ್ಳಲಾಗಿದೆ. ಅಂದು ಬೆಳಿಗ್ಗೆ ೮ ಗಂಟೆಗೆ ಮತ ಎಣಿಕೆ ಕಾರ್ಯ ಆರಂಭವಾಗಲಿದೆ ಎಂದು ಜಿಲ್ಲಾಧಿಕಾರಿ ಸಿ. ಸತ್ಯಭಾಮ ತಿಳಿಸಿದರು. ಮೊದಲಿಗೆ ಅಂಚೆ ಮತಪತ್ರ, ಬಳಿಕ ವಿದ್ಯುನ್ಮಾನ ಮತಯಂತ್ರಗಳ ಮತಗಳ ಎಣಿಕೆ ಕಾರ್ಯ ನಡೆಯಲಿದೆ. ೮ ವಿಧಾನಸಭಾ ಕ್ಷೇತ್ರದ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ೧೪ ಟೇಬಲ್‌ಗಳನ್ನು ನಿಗದಿಪಡಿಸಲಾಗಿದೆ. ಪ್ರತಿ ಸುತ್ತುವಾರು ಮತ ಎಣಿಕೆ ವಿವರವನ್ನು ಮೈಕ್ ಮೂಲಕ ಪ್ರಚುರಪಡಿಸಲಾಗುವುದು, ಬಳಿಕ ಮೇಲ್ ಮೂಲಕ ಫಲಿತಾಂಶದ ಮಾಹಿತಿ ನೀಡಲಾಗುವುದು ಎಂದು ಅವರು ಮಾಹಿತಿ ನೀಡಿದರು.

**(ಧ್ವನಿ-ಜಿಲ್ಲಾಧಿಕಾರಿ ಸಿ ಸತ್ಯಭಾಮ)**

ಉತ್ತರ ಕನ್ನಡ ಜಿಲ್ಲೆ ಕುಮಟಾದ ಮತ ಎಣಿಕೆ ಕೇಂದ್ರದ ೨೦೦ ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ ಆದೇಶಿಸಿದ್ದಾರೆ. ಮತ ಎಣಿಕೆ ಕೇಂದ್ರದ ಸುತ್ತಲಿನ ೧೦೦ ಮೀಟರ್ ವ್ಯಾಪ್ತಿಯನ್ನು ಪಾದಚಾರಿ ವಲಯ ಎಂದು ಗುರುತಿಸಲಾಗಿದ್ದು, ಯಾವುದೇ ವಾಹನಗಳಿಗೆ ಪ್ರವೇಶ ಮತ್ತು ಪಾರ್ಕಿಂಗ್ ಮಾಡಲು ಅವಕಾಶ ಇರುವುದಿಲ್ಲ. ಮೊಬೈಲ್ ಫೋನ್, ಇನ್ನಿತರೆ ಎಲೆಕ್ಟ್ರಾನಿಕ್ ಉಪಕರಣಗಳ ಬಳಕೆಯನ್ನು ನಿಷೇಧಿಸಲಾಗಿದೆ. ನಿಯಮ ಉಲ್ಲಂಘಿಸಿದರೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಎಚ್ಚರಿಕೆ ನೀಡಿದ್ದಾರೆ. ಗದಗ ಜಿಲ್ಲೆಯಲ್ಲಿ ಮತ ಏಣಿಕೆ ಕಾರ್ಯ ಮುಕ್ತ ಮತ್ತು ಶಾಂತಿಯುತವಾಗಿ ನಡೆಸುವ ಹಿನ್ನೆಲೆಯಲ್ಲಿ ಜೂನ್ ೩ ರ ಸಾಯಂಕಾಲ ೬ ಗಂಟೆಯಿಂದ ಜೂನ್ ೫ ರಬೆಳಿಗ್ಗೆ ೬ ಗಂಟೆಯವರೆಗೆ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಎಂ.ಎಲ್. ವೈಶಾಲಿ ಆದೇಶ ಹೊರಡಿಸಿದ್ದಾರೆ. ಈ ಅವಧಿಯಲ್ಲಿ ಯಾವುದೇ ಸಭೆ ಸಮಾರಂಭ ಅಥವಾ ಮೆರವಣಿಗೆಗಳನ್ನು ನಿಷೇಧಿಸಲಾಗಿದೆ. ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ತರುವ ಚಟುವಟಿಕೆಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

<><*<><>*><>

ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣ ಎದುರಿಸುತ್ತಿರುವ ಸಂಸದ ಪ್ರಜ್ವಲ್ ರೇವಣ್ಣ ಅವರನ್ನು ವಿಶೇಷ ತನಿಖಾ ತಂಡ ಕಳೆದ ರಾತ್ರಿ ಬೆಂಗಳೂರಿನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬಂಧಿಸಿದೆ. ಮ್ಯೂನಿಚ್‌ನಿಂದ ಆಗಮಿಸಿದ ಪ್ರಜ್ವಲ್

ಅವರನ್ನು ವಿಮಾನ ನಿಲ್ದಾಣದಲ್ಲಿಯೇ  ಎಸ್‌ಐಟಿ ಅಧಿಕಾರಿಗಳು ಭಾರಿ ಬಿಗಿ ಭದ್ರತೆ ನಡುವೆ  ಬಂಧಿಸಿ, ತಮ್ಮ ವಶಕ್ಕೆ ಪಡೆದುಕೊಂಡರು. ಬಳಿಕ ಅವರನ್ನು ಸಿಐಡಿ ಕಚೇರಿಗೆ ಕರೆತಂದು ವಿಚಾರಣೆಗೆ ಒಳಪಡಿಸಲಾಗಿದೆ. ಇಂದು ಅವರನ್ನು ವಿಶೇಷ ನ್ಯಾಯಾಲಯದ ನ್ಯಾಯಾಧೀಶರ ಮುಂದೆ ಹಾಜರುಪಡಿಸಿ, ಹೆಚ್ಚಿನ ವಿಚಾರಣೆಗಾಗಿ ಅವರನ್ನು ತಮ್ಮ ವಶಕ್ಕೆ ನೀಡುವಂತೆ ಎಸ್‌ಐಟಿ  ಕೋರಲಿದೆ.

<><*<><>*><>

೨೦೨೪-೨೫ನೇ ಶೈಕ್ಷಣಿಕ ವರ್ಷದ ಶಾಲೆಗಳು ಇಂದಿನಿಂದ ಆರಂಭವಾಗಿವೆ. ಶಾಲಾ ಆರಂಭದ ಮೊದಲ ದಿನ ಶಿಕ್ಷಕರು ಮಕ್ಕಳಿಗೆ ಗುಲಾಬಿ ಹೂವು ಹಾಗೂ ಸಿಹಿ ತಿಂಡಿ ನೀಡಿ ಸ್ವಾಗತಿಸಿದರು. ಸರ್ಕಾರಿ, ಅನುದಾನಿತ, ಅನುದಾನ ರಹಿತ ಶಾಲೆಗಳಲ್ಲಿ ಶೈಕ್ಷಣಿಕ ಚಟುವಟಿಕೆಗಳು ಗರಿಗೆದರಿದವು. ದಾವಣಗೆರೆ ಜಿಲ್ಲಾದ್ಯಂತ ೫೭೨ ಕಿರಿಯ ಪ್ರಾಥಮಿಕ ಶಾಲೆ, ೯೪೫ ಹಿರಿಯ ಪ್ರಾಥಮಿಕ ಶಾಲೆ ಮತ್ತು ೫೦೯ ಪ್ರೌಢಶಾಲೆಗಳು ಏಕಕಾಲಕ್ಕೆ  ಆರಂಭಗೊಂಡವು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಶಾಲೆಗಳಲ್ಲಿ ಮೂಲ ಸೌಕರ್ಯಗಳನ್ನು ಒದಗಿಸಲಾಗಿದ್ದು, ಪಠ್ಯ ಪುಸ್ತಕ ಹಾಗೂ ಸಮವಸ್ತ್ರಗಳನ್ನು ವಿತರಿಸಲಾಗುತ್ತಿದೆ ಎಂದು ಶಿಕ್ಷಣ ಇಲಾಖೆಯ ಜಿಲ್ಲಾ ಉಪ ನಿರ್ದೇಶಕ ಕೃಷ್ಣ ಮೂರ್ತಿ ತಿಳಿಸಿದ್ದಾರೆ. ಬಳ್ಳಾರಿ, ಯಾದಗಿರಿ ಸೇರಿದಂತೆ ರಾಜ್ಯದ ವಿವಿಧೆಡೆಗಳಲ್ಲಿ ಶಾಲೆಗಳು ಪುನರಾರಂಭವಾಗಿದ್ದು, ವಿದ್ಯಾರ್ಥಿಗಳು ಉತ್ಸಾಹದಿಂದ ಶಾಲೆಗೆ ಆಗಮಿಸಿದರು.  ಮಕ್ಕಳಿಗೆ ಉತ್ತಮ ಶಿಕ್ಷಣ ಕೊಟ್ಟಾಗ ಮಾತ್ರ ಅವರ ಭವಿಷ್ಯ ಉಜ್ವಲವಾಗಲು ಸಾಧ್ಯವಾಗುತ್ತದೆ. ಪ್ರಾಥಮಿಕ ಹಂತದಿಂದಲೇ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವ ನಿಟ್ಟಿನಲ್ಲಿ ಬೋಧಿಸಬೇಕು ಎಂದು ಯಾದಗಿರಿ  ಜಿಲ್ಲಾಧಿಕಾರಿ ಡಾ. ಬಿ.ಸುಶೀಲಾ ನಿರ್ದೇಶನ ನೀಡಿದರು.

<><*<><>*><>

ಜನನ-ಮರಣ ಪ್ರಮಾಣ ಪತ್ರಗಳೆರಡು ಮನುಷ್ಯನ ಜೀವನದ ಪ್ರಮುಖ ಪ್ರಮಾಣ ಪತ್ರಗಳಾಗಿದ್ದು, ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು ತಮ್ಮ ಜವಾಬ್ದಾರಿಯನ್ನು ಅರಿತು ಕಾರ್ಯನಿರ್ವಹಿಸಬೇಕು ಎಂದು ಉತ್ತರ ಕನ್ನಡ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಎಂ.ಸಿ ಚಂದ್ರಶೇಖರ ಹೇಳಿದರು. ಕಾರವಾರದಲ್ಲಿ ಆಯೋಜಿಸಿದ ತಂತ್ರಾಂಶ ನಿರ್ವಹಣೆ ಕುರಿತ ಎರಡು ದಿನಗಳ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಪತ್ರಿಯೊಬ್ಬರಿಗೂ ಶೀಘ್ರವಾಗಿ ಜನನ ಮತ್ತು ಪ್ರಮಾಣ ಪತ್ರ ದೊರೆಯಬೇಕು ಎಂಬ ಉದ್ದೇಶದಿಂದ ಗ್ರಾಮ ಪಂಚಾಯತಿ ಕಾರ್ಯದರ್ಶಿಗಳನ್ನು ಉಪನೋಂದಣಾಧಿಕಾರಿಗಳಾಗಿ ನೇಮಕ ಮಾಡಲಾಗಿದೆ ಎಂದು ತಿಳಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ವಿನೋದ ಅಣ್ವೇಕರ್ ಮಾತನಾಡಿ ಜನರಿಗೆ ಗ್ರಾಮ ಮಟ್ಟದಲ್ಲಿಯೇ ಸೌಲಭ್ಯ ದೊರೆಯಬೇಕು ಉದ್ದೇಶದಿಂದ ಕಾರ್ಯದರ್ಶಿಗಳಿಗೆ ಸರ್ಕಾರ ಗುರುತರವಾದ ಜವಾಬ್ದಾರಿಯನ್ನು ನೀಡಿದ್ದು, ಈ ಕಾರ್ಯವನ್ನು ಅತ್ಯಂತ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು ಎಂದರು.

<><*<><>*><>

ಬೆಳೆ ವಿಮಾ ಯೋಜನೆಗೆ ಹೆಚ್ಚಿನ ಸಂಖ್ಯೆಯಲ್ಲಿ ರೈತರು ನೋಂದಾಯಿಸಿಕೊಳ್ಳಬೇಕೆಂದು ಜಿಲ್ಲಾ ಪಂಚಾಯತಿ ಕಾರ್ಯನಿರ್ವಹಣಾಧಿಕಾರಿ ಜಿ. ಪ್ರಭು ರೈತರಿಗೆ ಕರೆ ನೀಡಿದರು. ಚಿಕ್ಕನಾಯಕನಹಳ್ಳಿ ತಾಲ್ಲೂಕು ಕಾಡೇನಹಳ್ಳಿ ಗ್ರಾಮದ ರೈತರ ತಾಕಿಗೆ ಭೇಟಿ ನೀಡಿ ಕೃಷಿ ಚಟುವಟಿಕೆಗಾಗಿ ರೈತರು ನಡೆಸಿರುವ ಭೂಮಿ ಸಿದ್ಧತೆಯನ್ನು ವೀಕ್ಷಿಸಿದ ನಂತರ ರೈತರೊಂದಿಗೆ ನಡೆಸಿದ ಸಂವಾದದಲ್ಲಿ ಮಾತನಾಡಿದ ಅವರು, ಕೃಷಿ ಅಧಿಕಾರಿಗಳು ಬೆಳೆ ವಿಮಾ ಯೋಜನೆಯ ಪ್ರಯೋಜನಗಳ ಬಗ್ಗೆ ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ರೈತರು ಬೆಳೆವಿಮಾ ಯೋಜನೆಗೆ ನೋಂದಾಯಿಸಿಕೊಳ್ಳುವಂತೆ ಗ್ರಾಮೀಣ ಪ್ರದೇಶಗಳಲ್ಲಿ ಅಗತ್ಯ ಪ್ರಚಾರ ಕೈಗೊಳ್ಳಬೇಕೆಂದು ಚಿಕ್ಕನಾಯಕನಹಳ್ಳಿ ಸಹಾಯಕ ಕೃಷಿ ನಿರ್ದೇಶಕರು ಶಿವರಾಜ್ ಕುಮಾರ್ ಅವರಿಗೆ ಸೂಚಿಸಿದರು. ನಂತರ ತಿಪಟೂರು ತಾಲ್ಲೂಕು ಕಿಬ್ಬನಹಳ್ಳಿ ವಿಎಸ್‌ಎಸ್‌ಎನ್ ಸೊಸೈಟಿಗೆ ಭೇಟಿ ನೀಡಿ ರಸಗೊಬ್ಬರ ದಾಸ್ತಾನು ಮತ್ತು ವಿತರಣೆ ಬಗ್ಗೆ ಪರಿಶೀಲಿಸಿದರು. ಬಳಿಕ ಬಿಳಿಗೆರೆ ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ

ನೀಡಿ ಸಾಂಕೇತಿಕವಾಗಿ ಬಿತ್ತನೆ ಬೀಜ ವಿತರಣೆ ಮಾಡಿ ರೈತರಿಗೆ ಬಿತ್ತನೆ ಬೀಜ ಕೊರತೆಯಾಗದಂತೆ ಎಚ್ಚರವಹಿಸಬೇಕು. ಬಿತ್ತನೆ ಬೀಜ ಖಾಲಿಯಾದಂತೆ ಹಂತ-ಹಂತವಾಗಿ ಸರಬರಾಜು ಸಂಸ್ಥೆಗಳಿಂದ ತರಿಸಿ ದಾಸ್ತಾನು ಮಾಡಬೇಕೆಂದು ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕ ಚೆನ್ನಕೇಶವ ಮೂರ್ತಿ ಅವರಿಗೆ ಸೂಚನೆ ನೀಡಿದರು.

<><*<><>*><>

ಇಂದು ವಿಶ್ವ ತಂಬಾಕು ರಹಿತ ದಿನವನ್ನಾಗಿ ಆಚರಿಸಲಾಗುತ್ತಿದ್ದು, ತಂಬಾಕು ಸೇವನೆಯಿಂದಾಗುವ ದುಷ್ಪರಿಣಾಮಗಳ ಕುರಿತು ಜನರಲ್ಲಿ ಅರಿವು ಮೂಡಿಸಲಾಗುತ್ತಿದೆ. ತಂಬಾಕು ಉದ್ಯಮದ ಹಸ್ತಕ್ಷೇಪದಿಂದ ಮಕ್ಕಳನ್ನು ರಕ್ಷಿಸುವುದು". ಈ ವರ್ಷದ" ಧ್ಯೇಯ ವಾಕ್ಯವಾಗಿದೆ. ಆರೋಗ್ಯಕ್ಕೆ ಮಾರಕವಾಗಿರುವ ತಂಬಾಕಿನಿಂದ ದೂರವಿರೋಣ, ಸದೃಢ ಸಮಾಜವನ್ನು ನಿರ್ಮಿಸೋಣ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸಾಮಾಜಿಕ ಜಾಲತಾಣ ಎಕ್ಸ್ ಸಂದೇಶದಲ್ಲಿ ತಿಳಿಸಿದ್ದಾರೆ. ಹಾಸನದಲ್ಲಿ ಭಾರತೀಯ ವೈದ್ಯಕೀಯ ಸಂಘದ ಸಹಯೋಗದಲ್ಲಿ ಆಯೋಜಿಸಿದ್ದ ಗರ್ಭಕೊರಳ ಕ್ಯಾನ್ಸರ್ ಬಗೆಗಿನ ಜಾಗೃತಿ ಜಾಥಾಗೆ ಜಿಲ್ಲಾಧಿಕಾರಿ ಸಿ.ಸತ್ಯಭಾಮ ಚಾಲನೆ ನೀಡಿದರು. ನೂರಾರು ಸಂಖ್ಯೆಯ ವೈದ್ಯಕೀಯ ವಿಧ್ಯಾರ್ಥಿಗಳು ಜಾಥಾದಲ್ಲಿ ಪಾಲ್ಗೊಂಡು, ನಾಮಫಲಕ ಪ್ರದರ್ಶಿಸುವ ಮೂಲಕ ಕ್ಯಾನ್ಸರ್ ಕುರಿತು ಜನರಲ್ಲಿ ತಿಳುವಳಿಕೆ ಮೂಡಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಸಿ. ಸತ್ಯಭಾಮ, ಎಚ್.ವಿ.ಪಿ ಲಸಿಕೆಯಿಂದ ಗರ್ಭ ಕೊರಳ ಕ್ಯಾನ್ಸರ್ ತಡೆಗಟ್ಟಲು ಸಾಧ್ಯ. ಮಹಿಳೆಯರು ಕಾಲಕ್ಕನುಗುಣವಾಗಿ ಲಸಿಕೆ ಪಡೆಯುವ ಮೂಲಕ ತಮ್ಮ ಆರೋಗ್ಯ ಕಾಪಾಡಿಕೊಳ್ಳುವಂತೆ ಕರೆ ನೀಡಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡ ಬಳ್ಳಾಪುರದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ತಾಲ್ಲೂಕು ಆರೋಗ್ಯ ಅಧಿಕಾರಿ ಡಾ. ಶಾರದಾ, ಮಕ್ಕಳು ತಂಬಾಕು ವ್ಯಸನಿಗಳಾಗದಂತೆ ತಡೆಯುವುದು ಮುಖ್ಯವಾಗಿದೆ. ತಂಬಾಕಿನಿಂದ ಆಗುವ ದುಷ್ಪರಿಣಾಮಗಳ ಕುರಿತು ಅರಿವು ಎಲ್ಲಾ ಇಲಾಖೆಗಳ ಸಹಕಾರ ಅಗತ್ಯವಾಗಿದೆ ಎಂದರು. ಕೋಲಾರದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಅಕ್ರಂ ಪಾಷ ತಂಬಾಕನ್ನು ತ್ಯಜಿಸುವುದರ ಮೂಲಕ ವ್ಯಸನ ಮುಕ್ತರಾಗಬೇಕು ಎಂದು ಕರೆ ನೀಡಿದರು.

**(ಧ್ವನಿ- ಅಕ್ರಂ ಪಾಷ)**

<><*<><>*><>

ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಜೊತೆಗೆ ಮಾನಸಿಕ ಆರೋಗ್ಯ ಕಾಯ್ದುಕೊಳ್ಳಬೇಕು ಎಂದು ಗದಗ ಜಿಲ್ಲಾ ಹಿರಿಯ ದಿವಾಣಿ ನ್ಯಾಯಾಧೀಶ ಸಿ.ಎಸ್. ಶಿವನಗೌಡ್ರ ಹೇಳಿದರು. ಗದಗದ ತೋಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯಲ್ಲಿ ಜರುಗಿದ “ವಿಶ್ವ ಸ್ಕಿಝೋಫ್ರೀನಿಯಾ ದಿನಾಚರಣೆ”ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮಾನಸಿಕ ಖಾಯಿಲೆ ಕುರಿತು ಜಾಗೃತಿ ಮೂಡಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ಮಾನಸಿಕ ಅಸ್ವಸ್ಥರಿಗೆ ಸಮಾಜದ ಕಾಳಜಿ ಅತ್ಯವಶ್ಯವಾಗಿದೆ ಎಂದರು. ಗದಗ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಮಾನಸಿಕ ಆರೋಗ್ಯ ವಿಭಾಗ ಮುಖ್ಯಸ್ಥ ಡಾ.ಸೊಮಶೇಖರ ಬಿಜ್ಜಳ ಮಾತನಾಡಿ, ಕೇಂದ್ರ ಸರ್ಕಾರ ಪ್ರಾರಂಭಿಸಿರುವ ಟೆಲಿ-ಮನಸ್ ಉಚಿತ ಸಹಾಯವಾಣಿ ಸಂಖ್ಯೆ ೧೪೪೧೬ ಗೆ ಕರೆ ಮಾಡಿ ಆಪ್ತ ಸಮಾಲೋಚನೆ ಪಡೆಯಬಹುದಾಗಿದೆ ಎಂದು ತಿಳಿಸಿದರು.

<><*<><>*><>

ಉತ್ತರ ಕನ್ನಡ ಜಿಲ್ಲೆಯಲ್ಲಿ ಜೂನ್ ೧ ರಿಂದ ಜುಲೈ ೩೧ ರವರೆಗೆ ಯಾಂತ್ರೀಕೃತ ದೋಣಿಗಳ ಮೀನುಗಾರಿಕೆಯನ್ನು ನಿಷೇಧಿಸಲಾಗಿದೆ. ಈ ಅವಧಿಯಲ್ಲಿ ಮೋಟಾರೀಕೃತ ದೋಣಿ ಹಾಗೂ ನಾಡದೋಣಿಗಳ ಮೂಲಕ ಮೀನುಗಾರಿಕೆಯಲ್ಲಿ ತೊಡಗಲು ಅನುಮತಿ ಇರುತ್ತದೆ. ಮಾರ್ಗಸೂಚಿ ಉಲ್ಲಂಘಿಸುವ ಮೀನುಗಾರರು ದಂಡ ಹಾಗೂ ಒಂದು ವರ್ಷದ ಅವಧಿಗೆ ಡೀಸೆಲ್ ಪಡೆಯಲು ಅನರ್ಹರಾಗುತ್ತಾರೆ ಎಂದು ಮೀನುಗಾರಿಕೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ <>*><>